ಇ) 1995-96ನೇ ಸಾಲಿಗೆ

ಪುರುಷರು	ಸ್ತ್ರೀಯರು
893	1953

ವಿಷಯ : ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ವೇತನ ಶ್ರೇಣಿ

1299 (1748)-ಶ್ರೀ ರಾಮಲಿಂಗರೆಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು

ಆ) ಈ ಮುಖ್ಯೋಪಾಧ್ಯಾಯರಿಗೆ ವೇತನ ಶ್ರೇಣಿ ಕುರಿತಂತೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿ ತೀರ್ಪು ನೀಡಿರುವುದು ನಿಜವಲ್ಲವೇ.

ಇ) ಹಾಗಿದ್ದಲ್ಲಿ ಆಡಳಿತ ನ್ಯಾಯ ಮಂಡಳಿಯ ತೀರ್ಪನ್ನು ಜಾರಿಗೊಳಿಸಲಾಗಿದೆಯೇ?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು).

ಅ) 1400

ಆ) ನಿಜ

ಇ) ದಿನಾಂಕ : 7-8-1996ರಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟಿನಲ್ಲಿ ವಿಶೇಷ ರಜೆ ಅರ್ಜಿ ಸಲ್ಲಿಸಲಾಗಿದೆ. ಆದ್ದರಿಂದ ದಾವೆ ಸಂಖ್ಯೆ:3200:94ರ ತೀರ್ಪಿನ ವಿರುದ್ಧ ದಿನಾಂಕ:6-12-96ರಲ್ಲಿ ವಿಶೇಷ ರಜೆ ಅರ್ಜಿಯನ್ನು ಸಲ್ಲಿಸಿರುವುದರಿಂದ ನ್ಯಾಯ ಮಂಡಳಿಯ ತೀರ್ಪನ್ನು ಜಾರಿಗೊಳಿಸಿಲ್ಲ.